ದಿನಾಂಕ 15-09-2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ಕುಮಾರಿ ಎನ್.ಕೆ.ಕೆ. ವಕೀಲರಿಂದ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ತಿಳಿಸಿದ ಎಲ್ಲ ಸಂಗತಿಗಳು ಸತ್ಯವಾಗಿವೆ. ಅದನ್ನು ನಾನೇ ಹೇಳಿ ಬರೆಸಿದ್ದೇನೆ. ನನ್ನ ಪ್ರಮಾಣ ಪತ್ರ ಲಗತ್ತು ಕೆಳಕಂಡ ದಾಖಲೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನನ್ನ ಪರ ನಿಶಾನೆಗಳಾಗಿ ಗುರುತಿಸಬೇಕೆಂದು ಕೇಳಿಕೊಳ್ಳುತ್ತೇನೆ.

ಸದರಿ ಪ್ರಕರಣದಲ್ಲಿ ನಾನು ಹಾಜರು ಪಡಿಸಿರುವ ದಾಖಲೆಗಳನ್ನು ಈಗ ನೋಡುತ್ತಿದ್ದೇನೆ, ಅವುಗಳನ್ನು ಈ ಕೆಳಕಂಡಂತೆ ಗುರುತಿಸಲಾಯಿತು.

1. ಸರ್ವೆ ನಂ.38/1 ರ ಪಹಣಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.1 ಎಂದು,
2. ಸರ್ವೆ ನಂ.38/3 ರ ಪಹಣಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.2 ಎಂದು,
3. ಜಿ.ಪಿ.ಸಿ ನಂ.202/ಬಿ ರ ಕರ ಆಕರಣೆಯಾದಿಯ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.3 ಎಂದು,
4. ಕಂದಾಯ ರಶೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.4 ಎಂದು,
5. ಗ್ರಾಮ ಪಂಚಾಯಿತಿಯವರಿಗೆ ನೀಡಿದ ಅರ್ಜಿಯ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.5 ಎಂದು,
6. ದಿನಾಂಕ 10.08.2001 ರಂದು ಚಿಕ್ಕಮುನವಳ್ಳಿ ಗ್ರಾಮ ಪಂಚಾಯಿತಿಯ ನಡಾವಳಿಯ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.6 ಎಂದು ಗುರುತಿಸಲಾಯಿತು.

***( ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಿ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು.)***

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ. ಹೇ. ಕೆ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಖಾನಾಪೂರ.